ಕರ್ನಾಟಕ ಸರ್ಕಾರ

ಸಂಖ್ಯೆ:ಕರಾವಿಯೋ&ಅಸ/74/ಉಪಾ/2021-22

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:02-09-2021

**ಜಂಟಿ ಸುತ್ತೋಲೆ**

**ವಿಷಯ:** **ಗ್ರಾಮ ಪಂಚಾಯಿತಿ ವತಿಯಿಂದ ಪಶುಪಾಲನಾ ಚಿಕಿತ್ಸಾ ಕೇಂದ್ರಗಳನ್ನು ಬಲಪಡಿಸುವ ಬಗ್ಗೆ.**

**ಉಲ್ಲೇಖ**

1. ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 06.02.2021 ರಂದು ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ನಡೆದ ಸಭೆಯ ನಡವಳಿ.
2. ಸರ್ಕಾರ ಪ್ರಧಾನ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 05 ಮತ್ತು 06 ಏಪ್ರಿಲ್-2021 ರಂದು ನಡೆದ ಕಾರ್ಯಗಾರದ ನಡವಳಿ.
3. ದಿನಾಂಕ:07-04-2021 ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
4. ದಿನಾಂಕ:14-06-2021 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಶಿವಮೊಗ್ಗದಲ್ಲಿ ನಡೆದ ಸಭೆಯ ನಡವಳಿ.
5. ದಿನಾಂಕ:02 ಮತ್ತು 03 ಜುಲೈ-2021 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಅಧ್ಯಕ್ಷತೆಯಲ್ಲಿ ಎ.ಎನ್.ಎಸ್.ಎಸ್.ಐ.ಆರ್.ಡಿ ಮತ್ತು ಪಿ.ಆರ್ ಮೈಸೂರುನಲ್ಲಿ ನಡೆದ ಕಾರ್ಯಾಗಾರದ ನಡವಳಿ.
6. ದಿನಾಂಕ:15-07-2021 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ.
7. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 266 ಗ್ರಾಪಂಅ 2021 ದಿನಾಂಕ: 27-07-2021

* * * * *

ಪಶು ಸಂಗೋಪನಾ ವಲಯವು ಗ್ರಾಮೀಣ ಆರ್ಥಿಕತೆಯಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಪಶು ಸಂಗೋಪನಾ ಚಟುವಟಿಕೆಯು ಕೃಷಿ ಸಂಬಂಧಿತ ಚಟುವಟಿಕೆಗಳಲ್ಲಿ ಮುಖ್ಯವಾಗಿರುತ್ತದೆ. ಅದರಲ್ಲೂ ಕ್ಷೀರ ಕ್ರಾಂತಿಯು ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಸಹಕಾರಿಯಾಗಿದೆ. ಗ್ರಾಮಾಂತರ ಪ್ರದೇಶಗಳಲ್ಲಿ ಇರುವ ಪಶು ಚಿಕಿತ್ಸಾ ಕೇಂದ್ರಗಳು ಜಾನುವಾರುಗಳ ಆರೋಗ್ಯ ಮತ್ತು ಸಂರಕ್ಷಣೆ ದೃಷ್ಟಿಯಿಂದ ಮಹತ್ವ ಪಡೆದುಕೊಂಡಿವೆ. ಗೋರಕ್ಷಣೆ ಕಾಯ್ದೆ ಸೇರಿದಂತೆ ಜಾನುವಾರುಗಳ ಸಂರಕ್ಷಣೆಗೆ ಸರ್ಕಾರದ ವತಿಯಿಂದ ಹೆಚ್ಚಿನ ಮುತುವರ್ಜಿ ವಹಿಸಲಾಗುತ್ತಿದೆ ಹಾಗೂ ಜಾನುವಾರುಗಳ ಸಂರಕ್ಷಣೆಗಾಗಿ ವಿವಿಧ ಯೋಜನೆಗಳನ್ನು ಸಹ ರೂಪಿಸಲಾಗಿದೆ. ಜಾನುವಾರುಗಳ ಸಮೀಕ್ಷೆ ಮಾಡುವುದು, ಜಾನುವಾರುಗಳ ಕಾಯಿಲೆಗಳನ್ನು ತಡೆಗಟ್ಟಲು ಜನರಲ್ಲಿ ಅರಿವು ಮೂಡಿಸುವುದು, ಜಾನುವಾರುಗಳ ಮೇಳ ನಡೆಸುವುದು, ಜಾನುವಾರುಗಳಿಗೆ ಚುಚ್ಚು ಮದ್ದು ಮತ್ತು ಆರೋಗ್ಯ ಸೇವೆಗಳನ್ನು ನೀಡುವ ಕಾರ್ಯಗಳನ್ನು ಪಶು ಚಿಕಿತ್ಸಾ ಕೇಂದ್ರಗಳ ಮೂಲಕ ಮಾಡಲಾಗುತ್ತಿದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 58 ರಲ್ಲಿ ಉಲ್ಲೇಖಿಸಿರುವ ಗ್ರಾಮ ಪಂಚಾಯಿತಿಗಳ ಪ್ರಕಾರ್ಯಗಳಲ್ಲಿ ಜಾನುವಾರುಗಳ ಸಂರಕ್ಷಣೆ ಸೇರಿದೆ. ಪಶು ಚಿಕಿತ್ಸಾ ಕೇಂದ್ರಗಳಿಗೆ ಬೇಕಾಗುವ ಮೂಲಸೌಕರ್ಯಗಳಾದ ಕಟ್ಟಡ/ದಾಸ್ತಾನು ಕೊಠಡಿ/ ಕಟ್ಟಡ ದುರಸ್ತಿ, ಕಾಂಪೌಂಡ್, ವಿದ್ಯುತ್ ಸಂಪರ್ಕ, ವಿದ್ಯುತ್ ಬಿಲ್ಲು ಪಾವತಿ, ಕುಡಿಯುವ ನೀರು ಸರಬರಾಜು, ವಾಟರ್ ಫಿಲ್ಟರ್, ಶೌಚಾಲಯ, ನೀರಿನ ತೊಟ್ಟಿ ಮುಂತಾದ ನೆರವುಗಳನ್ನು ಒದಗಿಸಬಹುದಾಗಿದೆ. ಗ್ರಾಮ ಪಂಚಾಯಿತಿಗಳು ಈ ಉದ್ದೇಶಕ್ಕಾಗಿ ತಮ್ಮ ಸ್ವಂತ ಸಂಪನ್ಮೂಲ ಆದಾಯ, ಕೇಂದ್ರ ಸರ್ಕಾರದ 15ನೇ ಹಣಕಾಸು ಆಯೋಗದ ಅನುದಾನ, ರಾಜ್ಯ

ಸರ್ಕಾರದ ಶಾಸನಬದ್ಧ ಅನುದಾನ, ಜಲಜೀವನ್ ಮಿಷನ್, ಮನರೇಗಾ ಮತ್ತು ಇತರೆ ಯೋಜನೆಗಳ ಅನುದಾನವನ್ನು ಬಳಸಿಕೊಳ್ಳಬಹುದಾಗಿದೆ.

ಈ ಹಿನ್ನೆಲೆಯಲ್ಲಿ, ಗ್ರಾಮ ಪಂಚಾಯಿತಿಗಳು ಪಶುಪಾಲನಾ ಚಿಕಿತ್ಸಾ ಕೇಂದ್ರಗಳ ಸ್ಥಿತಿಗತಿಗಳನ್ನು ಅಧ್ಯಯನ ಮಾಡಿ ಕೇಂದ್ರಗಳ ಬಲವರ್ಧನೆಗೆ ಕ್ರಮಗಳನ್ನು ವಹಿಸುವುದು ಅಗತ್ಯವಾಗಿರುತ್ತದೆ. ಈ ಬಗ್ಗೆ ಉಲ್ಲೇಖ (1) ರ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿವರವಾಗಿ ಚರ್ಚಿಸಲಾಗಿರುತ್ತದೆ. ಉಲ್ಲೇಖ (2), (3), (4), (5) ಹಾಗೂ (6) ರ ಸಭೆಗಳಲ್ಲಿ ಸಹ ವಿಸ್ತೃತವಾಗಿ ಚರ್ಚಿಸಲಾಗಿದೆ. ಈ ಉದ್ದೇಶಕ್ಕಾಗಿ ಗ್ರಾಮ ಪಂಚಾಯಿತಿಗಳು ಪಶುಪಾಲನಾ ಚಿಕಿತ್ಸಾ ಕೇಂದ್ರಗಳ ಅಧ್ಯಯನಕ್ಕೆ ಭೇಟಿ ನೀಡಲು ಅನುಕೂಲವಾಗುವಂತೆ ಸರ್ಕಾರದ ವತಿಯಿಂದ ಉಲ್ಲೇಖ (7) ರಂತೆ ಭೇಟಿ ಸಂದರ್ಭದಲ್ಲಿ ಮಾಹಿತಿಯನ್ನು ಸಂಗ್ರಹಿಸುವ ಸಲುವಾಗಿ ನಮೂನೆಗಳನ್ನು ಒಳಗೊಂಡಂತೆ ಸುತ್ತೋಲೆಯನ್ನು ಹೊರಡಿಸಲಾಗಿದೆ. ಈ ನಮೂನೆಗಳು ಪಶುಪಾಲನಾ ಚಿಕಿತ್ಸಾ ಕೇಂದ್ರಗಳನ್ನು ಅಧ್ಯಯನ ಮಾಡಲು ಮಾರ್ಗದರ್ಶಿಯಾಗಿರುತ್ತವೆ ಹೊರತು ಅಂತಿಮವಾಗಿರುವುದಿಲ್ಲ. ಸ್ಥಳೀಯ ಸನ್ನಿವೇಶಕ್ಕನುಗುಣವಾಗಿ ಇನ್ನೂ ಹೆಚ್ಚಿನ ವಿಷಯಗಳನ್ನು ತಿಳಿದು ಪಶುಪಾಲನಾ ಚಿಕಿತ್ಸಾ ಕೇಂದ್ರಗಳಿಗೆ ಅನುಕೂಲ ಕಲ್ಪಿಸಬಹುದಾಗಿದೆ.

ಗ್ರಾಮ ಪಂಚಾಯಿತಿ ವತಿಯಿಂದ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷರು ಕನಿಷ್ಠ ಮೂರು ತಿಂಗಳಿಗೊಮ್ಮೆ ತಮ್ಮ ವ್ಯಾಪ್ತಿಯ ಪಶುಪಾಲನಾ ಚಿಕಿತ್ಸಾ ಕೇಂದ್ರಗಳಿಗೆ ಭೇಟಿ ನೀಡಿ ವೈದ್ಯರು ಹಾಗೂ ಜನರೊಂದಿಗೆ ಸಮಾಲೋಚಿಸಿ ಅಲ್ಲಿನ ಸ್ಥಿತಿಗತಿಗಳನ್ನು ಅಧ್ಯಯಿಸಿ ಕೇಂದ್ರಗಳ ಬಲವರ್ಧನೆಗೆ ಸಕಾರಾತ್ಮಕ ಕ್ರಮಗಳನ್ನು ಕೈಗೊಳ್ಳಬೇಕೆಂಬುದು ಸರ್ಕಾರದ ಆಶಯವಾಗಿದೆ.

ಈ ಬಗ್ಗೆ ಗ್ರಾಮ ಪಂಚಾಯಿತಿಗಳಲ್ಲಿ ತ್ರೈಮಾಸಿಕವಾಗಿ ನಡೆಯುವ ಕೆ.ಡಿ.ಪಿ. ಸಭೆಗಳಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಗೆ ಸಂಬಂಧಿಸಿದ ಸಿಬ್ಬಂದಿ ಭಾಗವಹಿಸಿ ಸಭೆಯಲ್ಲಿ ಚರ್ಚಿಸುವುದರ ಮೂಲಕ ಗ್ರಾಮ ಪಂಚಾಯಿತಿಯಿಂದ ಅಗತ್ಯ ನೆರವು ಪಡೆಯಬಹುದಾಗಿದೆ. ಗ್ರಾಮ ಪಂಚಾಯತ್‌ನ ದೂರದೃಷ್ಟಿ ಯೋಜನೆಯಲ್ಲಿಯೂ ಸಹಾ ಮೂಲಸೌಕರ್ಯಗಳ ಅವಶ್ಯಕತೆ ಹಾಗೂ ಸಾಮಾಜಿಕ ಗುರಿಗಳನ್ನು ಅಳವಡಿಸುವುದು. ಗ್ರಾಮ ಪಂಚಾಯಿತಿಯಲ್ಲಿ ಅನುದಾನ ಕೊರತೆಯಾದಲ್ಲಿ ತಾಲ್ಲೂಕು ಪಂಚಾಯತ್ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯಕ್ರಮಗಳಲ್ಲಿಯೂ ಅಳವಡಿಸಿಕೊಳ್ಳಲು ಪ್ರಸ್ತಾವನೆ ಸಲ್ಲಿಸುವುದು.

ಗ್ರಾಮ ಪಂಚಾಯಿತಿಗಳು ಪಶುಪಾಲನಾ ಚಿಕಿತ್ಸಾ ಕೇಂದ್ರಗಳಿಗೆ ನೀಡಿದ ಭೇಟಿ ಹಾಗೂ ಕೈಗೊಂಡ ಕ್ರಮಗಳ ಬಗ್ಗೆ ವರದಿಯನ್ನು ಪಂಚತಂತ್ರದಲ್ಲಿ ಅಳವಡಿಸಲು ತಿಳಿಸಲಾಗಿದೆ.

ಆದ್ದರಿಂದ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು/ ಸಿಬ್ಬಂದಿ ಹಾಗೂ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆಯ ಅಧಿಕಾರಿಗಳು / ಸಿಬ್ಬಂದಿ, ಪಂಚಾಯತ್ ರಾಜ್ ವ್ಯವಸ್ಥೆಯ ಚುನಾಯಿತ ಪ್ರತಿನಿಧಿಗಳು ಪರಸ್ಪರ ಸಹಕಾರ ಮತ್ತು ಸಮನ್ವಯತೆಯೊಂದಿಗೆ ಪಶುಪಾಲನಾ ಚಿಕಿತ್ಸಾ ಕೇಂದ್ರಗಳನ್ನು ಬಲಪಡಿಸುವುದರ ಮೂಲಕ ಗ್ರಾಮೀಣ ಪ್ರದೇಶದಲ್ಲಿ ಕೃಷಿ ಸಂಬಂಧಿತ ಚಟುವಟಿಕೆಯಾದ ಪಶು ಸಂಗೋಪನಾ ಚಟುವಟಿಕೆಯನ್ನು ಪ್ರೋತ್ಸಾಹಿಸುವುದು.

(ಮೇಜರ್ ಮಣಿವಣ್ಣನ್ ಪಿ.)
ಸರ್ಕಾರದ ಕಾರ್ಯದರ್ಶಿ
ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು.
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು.

**ಪ್ರತಿಯನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಕಳುಹಿಸಿದೆ.**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
2. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬಹುಮಹಡಿ ಕಟ್ಟಡ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಪಶುಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ರವರ ಆಪ್ತ ಕಾರ್ಯದರ್ಶಿ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು.
6. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ ರವರ ಆಪ್ತ ಶಾಖೆ, ಬೆಂಗಳೂರು.
7. ಆಯುಕ್ತರು, ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, 1ನೇ ಮಹಡಿ, ಪಶುಪಾಲನಾ ಭವನ, ಸಿ.ಬಿ.ಐ.ಕಚೇರಿ ಎದುರು, ಬಳ್ಳಾರಿ ರಸ್ತೆ, ಹೆಬ್ಬಾಳ, ಬೆಂಗಳೂರು.
8. ಎಲ್ಲಾ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರು, ಪಶುಸಂಗೋಪನೆ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ.
9. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ / ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
10. ಕಛೇರಿ ಪ್ರತಿ.